







ದಿನಾಂಕ:31-12-2026 ರಂದು ಬೆಂಗಳೂರು ಪ್ರೆಸ್ ಕ್ಲಬ್ ವತಿಯಿಂದ ಪ್ರೆಸ್ ಕ್ಲಬ್ ಆವರಣ, ಕಬ್ಬನ್‌ಪಾರ್ಕ್‌ನಲ್ಲಿ ನಡೆದ "ವರ್ಷದ ವ್ಯಕ್ತಿ ಪ್ರಶಸ್ತಿ" ಪ್ರದಾನ ಕಾರ್ಯಕ್ರಮದಲ್ಲಿ ಮಾತನಾಡಿದ ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸಭಾಪತಿ ಶ್ರೀ ಬಸವರಾಜ ಎಸ್ ಹೊರಟ್ಟಿ ಅವರು ಪತ್ರಕರ್ತರು ಯಾರಿಗೂ ಹೆದರದೆ ತಮ್ಮ ಕರ್ತವ್ಯ ನಿರ್ವಹಿಸಬೇಕು ಹಾಗೂ ತಮ್ಮ ಆತ್ಮಸಾಕ್ಷಿಗೆ ಅನುಗುಣವಾಗಿ ಕೆಲಸ ಮಾಡುವ ಗುಣವನ್ನು ಮುಂದುವರೆಸಿಕೊಂಡು ಹೋಗಬೇಕು. ಪತ್ರಿಕಾ ರಂಗವು ಪ್ರಜಾಪ್ರಭುತ್ವದ 4ನೇ ಅಂಗವಾಗಿದ್ದು, ಸಮಾಜವನ್ನು ತಿದ್ದುವಲ್ಲಿ ಮತ್ತು ಪರಿವರ್ತನೆ ಮಾಡುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ತಿಳಿಸಿದರು.